**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತೇಳನೆಯ ಅಧಿವೇಶನ**

# ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–86)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ಅಧಿನಿಯಮ, 2017ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ಅಧಿನಿಯಮ, 2017 (2017ರ ಕರ್ನಾಟಕ ಅಧಿನಿಯಮ ಸಂ. 45)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 13ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ಅಧಿನಿಯಮ, 2017 (2017ರ ಕರ್ನಾಟಕ ಅಧಿನಿಯಮ ಸಂ. 45)ರ 13ನೇ ಪ್ರಕರಣದ (1)ನೇ ಉಪ-ಪ್ರಕರಣದಲ್ಲಿ "ಒಂದು ಸಾವಿರ ರೂಪಾಯಿಗಳಿಗೆ ಹೆಚ್ಚಿರದಂಥ" ಎಂಬ ಪದಗಳನ್ನು ಬಿಟ್ಟುಬಿಡತಕ್ಕದ್ದು.

## **ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ**
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ವಾಹನಗಳನ್ನು ನೋಂದಣಿ ಮಾಡುವ ಸಮಯದಲ್ಲಿ ಒಂದು ಬಾರಿಯ ಸೆಸ್ ಅನ್ನು ಹೆಚ್ಚಿನ ಮಿತಿಯಲ್ಲಿ ವಿಧಿಸುವುದನ್ನು ಮತ್ತು ಸಂಗ್ರಹಿಸುವುದನ್ನು ಬಿಟ್ಟುಬಿಡುವುದಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ಅಧಿನಿಯಮ, 2017 (2017ರ ಕರ್ನಾಟಕ ಅಧಿನಿಯಮ ಸಂ. 45)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ರಾಮಲಿಂಗಾ ರೆಡ್ಡಿ**
ಸಾರಿಗೆ ಮತ್ತು ಮುಜರಾಯಿ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

**ಅನುಬಂಧ**

**ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ಅಧಿನಿಯಮ, 2017**

**(2017ರ ಕರ್ನಾಟಕ ಅಧಿನಿಯಮ ಸಂ. 45)ರ ಉದ್ಧೃತ ಭಾಗ**

**XXX XXX XXX**

**13. ಉಪಕರವನ್ನು ವಿಧಿಸುವುದು ಮತ್ತು ಸಂಗ್ರಹಿಸುವುದು.-** (1) ವಾಹನ ನೋಂದಣಿ ಸಮಯದಲ್ಲಿ ರಾಜ್ಯ ಸರ್ಕಾರವು ಅಧಿಸೂಚಿಸಬಹುದಾದ ಅಂಥ ದರದಲ್ಲಿ, ಒಂದು ಸಾವಿರ ರೂಪಾಯಿಗಳಿಗೆ ಹೆಚ್ಚಿರದಂಥ ಏಕಕಾಲಿಕ ಉಪಕರವನ್ನು ವಿಧಿಸತಕ್ಕದ್ದು ಮತ್ತು ಸಂಗ್ರಹಿಸತಕ್ಕದ್ದು. ಬೇರೆ ಬೇರೆ ವರ್ಗದ ಮೋಟಾರು ವಾಹನಗಳಿಗಾಗಿ ಬೇರೆ ಬೇರೆ ದರಗಳನ್ನು ವಿಧಿಸಬಹುದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಹೊರಡಿಸಿದ ಪ್ರತಿಯೊಂದು ಅಧಿಸೂಚನೆಯನ್ನು ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

(3) ನೋಂದಣಿ ಪ್ರಾಧಿಕಾರವು, ನೋಂದಣಿ ಸಮಯದಲ್ಲಿ ಹಾಗೆ ವಿಧಿಸಿದ ಉಪಕರವನ್ನು ಸಂಗ್ರಹಿಸತಕ್ಕದ್ದು ಮತ್ತು ನಿಯಮಿಸಬಹುದಾದ ಅಂಥ ರೀತಿಯಲ್ಲಿ ಅದನ್ನು ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ನಿಧಿಗೆ ಇರಸಾಲು (remit) ಮಾಡತಕ್ಕದ್ದು.

**XXX XXX XXX**

ಸರ್ಕಾರಿ ಮುದ್ರಣಾಲಯ, ಸುವರ್ಣ ಸೌಧ, ಬೆಳಗಾವಿ, ಕಾಸೂ 61, ಪ್ರತಿಗಳು 250, 16ನೇ ಡಿಸೆಂಬರ್ 2025